ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ
ಮುಕ್ತಗಂಗೋತ್ರಿ, ಮೈಸೂರು – 570 006.
ಆಡಳಿತ ವಿಭಾಗ

ಸಂಖ್ಯೆ:ಕರಾಮುವಿ/ಆವಿ/ಜಿಎಲ್-02/ರಮಕಸಕ/717/2024-25 ದಿನಾಂಕ: 09-01-2025

# ಸುತ್ತೋಲೆ

ವಿಷಯ: ಮೈಸೂರು ರಂಗಾಯಣದ ಪ್ರತಿಷ್ಠಿತ ಉತ್ಸವ 'ಬಹುರೂಪಿ ರಾಷ್ಟ್ರೀಯ ನಾಟಕೋತ್ಸವ-2025' ಹಾಗೂ ಇತರೆ ಚಟುವಟಿಕೆಗಳಲ್ಲಿ ಸ್ವಯಂಪ್ರೇರಿತವಾಗಿ ಭಾಗವಹಿಸುವ ಬಗ್ಗೆ.

ಉಲ್ಲೇಖ: 1. ಉಪನಿರ್ದೇಶಕರು, ರಂಗಾಯಣ, ಮೈಸೂರು ರವರ ಪತ್ರದ ಕ್ರ.ಸಂ.ನಾಕರಂ/ಬಹು-2025/13/2024-25 ದಿನಾಂಕ: 31-12-2024.
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 09/01/2025

* * * * *

ಈ ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ವಿಶ್ವವಿದ್ಯಾನಿಲಯದ ಎಲ್ಲಾ ಬೋಧಕ ವರ್ಗದವರು ಮತ್ತು ವಿದ್ಯಾರ್ಥಿಗಳ ಗಮನಕ್ಕೆ ತರುತ್ತಾ, ಮೈಸೂರಿನ ಹೆಮ್ಮೆಯ ಉತ್ಸವವಾದ "**ಬಹುರೂಪಿ ರಾಷ್ಟ್ರೀಯ ನಾಟಕೋತ್ಸವ-2025**"ವನ್ನು ಜನವರಿ 14 ರಿಂದ 19ರ ವರೆಗೆ ಮೈಸೂರಿನ ರಂಗಾಯಣ ಮತ್ತು ಕಲಾಮಂದಿರದ ಆವರಣದಲ್ಲಿ ಆಯೋಜಿಸಲಾಗಿದೆ. ಸದರಿ ಸಮಾರಂಭದಲ್ಲಿ ವಿವಿಧ ಭಾಷೆಗಳ ನಾಟಕಗಳು, ಚಲನಚಿತ್ರೋತ್ಸವ, ವಿಚಾರ ಸಂಕಿರಣ, ಜಾನಪದ ಕಲೆಗಳ ಪ್ರದರ್ಶನ, ಸಂಗೀತ ನೃತ್ಯ ಪ್ರದರ್ಶನ, ಪುಸ್ತಕ ಮೇಳ, ಕರಕುಶಲ ಮೇಳ, ದೇಸಿ ಆಹಾರ ಮೇಳ ಹಾಗೂ ಇತರೆ ಚಟುವಟಿಕೆಗಳನ್ನು ಆಯೋಜಿಸಲಾಗಿರುತ್ತದೆ.

ಸದರಿ ಉತ್ಸವಕ್ಕೆ ವಿಶ್ವವಿದ್ಯಾನಿಲಯದ ಬೋಧಕ ವರ್ಗದವರು ಮತ್ತು ವಿದ್ಯಾರ್ಥಿಗಳು ಭಾಗವಹಿಸುವಂತೆ ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವ ಹಿನ್ನಲೆಯಲ್ಲಿ ಸ್ವಯಂಪ್ರೇರಿತವಾಗಿ ಭಾಗವಹಿಸುವ ಬೋಧಕ ವರ್ಗದವರು ವಿಭಾಗದ ಮುಖ್ಯಸ್ಥರ ಅನುಮತಿ ಪಡೆಯಲು ತಿಳಿಸಲಾಗಿದೆ ಹಾಗೂ ಸದರಿ ಉತ್ಸವದ ವಿವಿಧ ಸಾಂಸ್ಕೃತಿಕ ಮತ್ತು ಇತರೆ ಚಟುವಟಿಕೆಗಳಲ್ಲಿ ಭಾಗವಹಿಸಿರುವ ಬಗ್ಗೆ ನೀಡಿರುವ ಪ್ರಮಾಣ ಪತ್ರದ ಭಾಯಾ ಪ್ರತಿಯನ್ನು ವಿಭಾಗದ ಮುಖ್ಯಸ್ಥರಿಗೆ ಸಲ್ಲಿಸಲು ಸೂಚಿಸಲಾಗಿದೆ.

ಕುಲಸಚಿವ

ಗೆ,

ವಿ.ವಿ ನಿಲಯದ ಎಲ್ಲಾ ಬೋಧಕ ವರ್ಗದವರು ಮತ್ತು ವಿದ್ಯಾರ್ಥಿಗಳು, ಕರಾಮುವಿ, ಮೈಸೂರು.

ಪ್ರತಿಗಳು :

1. ಎಲ್ಲಾ ಶಾಸನಬದ್ಧ ಅಧಿಕಾರಿಗಳು, ಕರಾಮುವಿ, ಮೈಸೂರು.
2. ಡೀನ್ (ಅಧ್ಯಯನ ಕೇಂದ್ರಗಳು), ಕರಾಮುವಿ, ಮೈಸೂರು.
3. ಉಪನಿರ್ದೇಶಕರು, ರಂಗಾಯಣ, ಮೈಸೂರು.
4. ವಿಶೇಷಾಧಿಕಾರಿಗಳು, ಮಾನ್ಯ ಕುಲಪತಿಗಳ ಆಪ್ತ ಕಾರ್ಯಾಲಯ, ಕರಾಮುವಿ, ಮೈಸೂರು.
5. ಕುಲಸಚಿವರ ಆಪ್ತ ಸಹಾಯಕರು, ಕರಾಮುವಿ, ಮೈಸೂರು.
6. ಕಾರ್ಯಪಾಲಕ ಅಭಿಯಂತರರು, ಇಂಜನಿಯರಿಂಗ್ ವಿಭಾಗ, ಕರಾಮುವಿ, ಮೈಸೂರು.
7. ಉಪಕುಲಸಚಿವ/ಸಹಾಯಕ ಕುಲಸಚಿವ/ ಅಧೀಕ್ಷಕರು ಸದರಿ ವಿಷಯವನ್ನು ಎಲ್ಲಾ ಸಿಬ್ಬಂದಿಗಳ ಗಮನಕ್ಕೆ ತರುವುದು.
8. ಸಂಯೋಜನಾಧಿಕಾರಿ, ಕಲಿಕಾರ್ಥಿ ಕಲ್ಯಾಣ ಕೇಂದ್ರ, ಕರಾಮುವಿ, ಮೈಸೂರು.
9. ಡಾ. ನವೀನ್ ಕುಮಾರ್ ಸಿ.ಜಿ, ನೋಡಲ್ ಆಫೀಸರ್, ವೆಬ್‌ಸೈಟ್, ಕರಾಮುವಿ, ಮೈಸೂರು, ಇವರಿಗೆ ಈ ಸುತ್ತೋಲೆಯನ್ನು ವಿ.ವಿ ನಿಲಯದ ಅಧಿಕೃತ ವೆಬ್‌ಸೈಟ್ ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
10. ಕಛೇರಿ ಪ್ರತಿ.